**ಕರ್ನಾಟಕ ಸರ್ಕಾರ**

ಸಂಖ್ಯೆ:ಆಇ 2 ಸೇನಿಸೇ 2012

ಕರ್ನಾಟಕ ಸರ್ಕಾರದ ಸಚಿವಾಲಯ
ಎರಡನೇ ಮಹಡಿ, ವಿಧಾನಸೌಧ
ಬೆಂಗಳೂರು, ದಿನಾಂಕ : 24.5.2012

**ಸುತ್ತೋಲೆ**

ವಿಷಯ: ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಕೊಡುಗೆ ಯೋಜನೆಯ ವ್ಯಾಪ್ತಿಗೆ ಬರುವ ಸರ್ಕಾರಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದ ಸಂದರ್ಭದಲ್ಲಿ ಅವರ ಕುಟುಂಬಗಳಿಗೆ ನೀಡಬಹುದಾದ ಇಡಿಗಂಟಿನ ಪರಿಹಾರ ನೀಡುವ ಬಗ್ಗೆ.

ಉಲ್ಲೇಖ: 1.ಸರ್ಕಾರಿ ಆದೇಶ ಸಂಖ್ಯೆ: ಆಇ 3 ಸೇನಿಸೇ 2010 ದಿನಾಂಕ 12.10.2010 ಮತ್ತು 15.4.2011
2.ಖಜಾನೆ ನಿರ್ದೇಶಕರು, ಬೆಂಗಳೂರು ಇವರ ಪತ್ರ ಸಂಖ್ಯೆ: ಖನಿ/ಎನ್.ಪಿ.ಎಸ್/04/10–11 ದಿನಾಂಕ 20.9.2011

*****

ಮೇಲಿನ ಉಲ್ಲೇಖ (1)ರಲ್ಲಿನ ದಿನಾಂಕ 12.10.2010ರ ಆದೇಶದಲ್ಲಿ ಈ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿದ್ದು, ವಯೋ ನಿವೃತ್ತಿ ಮುನ್ನವೇ ಸೇವೆಯಲ್ಲಿದ್ದಾಗ ಮೃತ ಹೊಂದುವ ಸರ್ಕಾರಿ ನೌಕರರ ಪ್ರಕರಣಗಳಲ್ಲಿ ಅವರ ಕುಟುಂಬದವರ ಸಂಕಷ್ಟವನ್ನು ನಿವಾರಿಸುವ ಉದ್ದೇಶದಿಂದ ಅಂತಹ ಮೃತ ನೌಕರರ ಕುಟುಂಬದವರಿಗೆ ಪರಿಹಾರ ನೀಡುವ ಯೋಜನೆಯೊಂದನ್ನು ರೂಪಿಸಿರುವುದಾಗಿದೆ. ಇದನ್ನು ಮುಂದುವರೆಸಿ ದಿನಾಂಕ 15.4.2011ರ ಆದೇಶದಲ್ಲಿ ಈ ಯೋಜನೆಯಡಿಯಲ್ಲಿ ಪರಿಹಾರವನ್ನು ಮಂಜೂರು ಮಾಡುವ ಹಾಗೂ ಅಧೀಕರಿಸಲು ಅನುಸರಿಸಬೇಕಾದ ವಿಧಿವಿಧಾನಗಳ ಕುರಿತು ತಿಳಿಸಿರುವುದಾಗಿದೆ.

ಉಲ್ಲೇಖ (2)ರಲ್ಲಿನ ಖಜಾನೆ ನಿರ್ದೇಶಕರ ಪತ್ರದಲ್ಲಿ ಪರಿಹಾರಧನವನ್ನು ನಮೂನೆ–ಬಿ ರಲ್ಲಿ ಅಧೀಕರಿಸಿದ ತರುವಾಯದಲ್ಲಿ, ಇಲಾಖೆಗಳು ನಮೂನೆ–ಬಿ ಯನ್ನು ಇತರೆ ದಾಖಲೆಗಳೊಂದಿಗೆ ಮೊಬಲಗನ್ನು ಪಾವತಿಸುವ ಸಲುವಾಗಿ ನೇರವಾಗಿ ನಿರ್ದೇಶನಾಲಯಕ್ಕೆ ಸಲ್ಲಿಸುತ್ತಿರುವ ಅಂಶಗಳನ್ನು ಸರ್ಕಾರದ ಗಮನಕ್ಕೆ ತಂದಿರುತ್ತಾರೆ.

ಯಾವುದೇ ಮೊತ್ತವನ್ನು ಖಜಾನೆಯ ಮೂಲಕ ಸೆಳೆದು ಪಾವತಿ ಮಾಡುವ ಪೂರ್ವದಲ್ಲಿ ಇದಕ್ಕೆ ಸಂಬಂಧಿಸಿದಂತೆ ಸದರಿ ಮೊಬಲಗನ್ನು ಒಂದು ಕಾರ್ಯಕಾರಿ ಆದೇಶದ ಮೂಲಕ ಮಂಜೂರು ಮಾಡತಕ್ಕದಾಗಿದ್ದು, ಈ ಆದೇಶದ ಆಧಾರದ ಮೇರೆಗೆ ಬಿಲ್ಲನ್ನು ತಯಾರಿಸಿ ಸಂಬಂಧಪಟ್ಟ ಖಜಾನೆಗೆ ಸಲ್ಲಿಸಿದಲ್ಲಿ ಮಾತ್ರ ಸದರಿ ಮೊತ್ತವನ್ನು ಚೆಕ್ ಮೂಲಕ ಪಾವತಿಸುವಲ್ಲಿ ಸಂಬಂಧಪಟ್ಟ ಖಜಾನೆಯು ಕ್ರಮಕೈಗೊಳ್ಳುವುದಾಗಿದೆ, ಈ ವಿಧಾನವು ಸಾಮಾನ್ಯವಾಗಿ ಖಜಾನೆಯಿಂದ ಹಣ ಸೆಳೆಯುವ ಎಲ್ಲಾ ಪ್ರಕರಣಗಳಿಗೆ ಅನ್ವಯವಾಗತಕ್ಕದ್ದು. ಈ ಹಿನ್ನೆಲೆಯಲ್ಲಿ

ದಿನಾಂಕ 15.4.2011ರ ಆದೇಶದಲ್ಲಿ ಸೂಚಿಸಿರುವ ವಿಧಿವಿಧಾನಗಳನ್ನು ಮುಂದುವರೆಸಿದಂತೆ, ನಿಗದಿತ ನಮೂನೆ–ಬಿರಲ್ಲಿ ಸಕ್ಷಮ ಪ್ರಾಧಿಕಾರವು ಪರಿಹಾರವನ್ನು ಮಂಜೂರು ಮಾಡಿ ಪರಿಹಾರವನ್ನು ಅಧೀಕರಿಸಿದ ತರುವಾಯದಲ್ಲಿ ಸದರಿ ಮೊಬಲಗನ್ನು ಒಂದು ಕಾರ್ಯಕಾರಿ ಆದೇಶದ ಮೂಲಕ ಮಂಜೂರು ಮಾಡತಕ್ಕದ್ದು ಮತ್ತು ಈ ಆದೇಶದ ಆಧಾರದ ಮೇರೆಗೆ ಬಿಲ್ಲನ್ನು ತಯಾರಿಸಿ ಸಂಬಂಧಪಟ್ಟ ಖಜಾನೆಗೆ ಸಲ್ಲಿಸಿ, ಸದರಿ ಮೊತ್ತವನ್ನು ಚೆಕ್ ಮೂಲಕ ಖಜಾನೆಯಿಂದ ಸೆಳೆದು ಮೃತರ ಕುಟುಂಬದ ಅರ್ಹ ವಾರಸುದಾರರಿಗೆ ಪಾವತಿಸುವಲ್ಲಿ ಕ್ರಮವಹಿಸತಕ್ಕದಾಗುತ್ತದೆ ಎಂದು ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Alice Gonsalves 24/5/2012
(ಆಲಿಸ್ ಗೊನ್ಸಾಲ್ವಿಸ್)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು–1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ).
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು
10. ರಿಜಿಸ್ಟ್ರಾರ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು,
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.

13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು
16. ಪ್ರಾಜೆಕ್ಟ್ ಆಫೀಸರ್,ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-A, ಬಹುಮಹಡಿಗಳ ಕಟ್ಟಡ, ಬೆಂಗಳೂರು
17. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
18. ಅಧ್ಯಕ್ಷರು,ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
19. ಕರ್ನಾಟಕ ಸರ್ಕಾರಿ ಸಚಿವಾಲಯ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
20. ವಾರಪತ್ರ/ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ:7 ರಿಂದ 14 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.